# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** **ದಿನಾಂಕ:17.04.2020**

**ಬಿಬಿಎಂಪಿ 2020-21ನೇ ಸಾಲಿನ ಆಯವ್ಯಯ ಮಂಡನೆಯ ಪೂರ್ವ ಸಿದ್ದತೆ ಮಾಡಿಕೊಂಡಿರುವ ಬಗ್ಗೆ ತಪಾಸಣೆ: ಪೂಜ್ಯ ಮಹಾಪೌರರು**



ಕೋವಿಡ್-19 ಹಿನ್ನೆಲೆ ಸರ್ಕಾರ ನಿರ್ದೇಶನದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 2020-21ನೇ ಆಯವ್ಯಯವನ್ನು ದಿನಾಂಕ: 20.04.2020 ರಂದು ವೀಡಿಯೋ ಕಾನ್ಫರೆನ್ಸ್(Video Conference) ಮೂಲಕ ಮಂಡನೆ ಮಾಡಲಾಗುತ್ತಿದ್ದು, ಪಾಲಿಕೆ ಸದಸ್ಯರುಗಳಿಗೆ ಆಯಾ ವಲಯಗಳ ಮಟ್ಟದಲ್ಲಿ ಸಾಮಾಜಿಕ ಅಂತರ ಕಾಯ್ದುಕೊಂಡು ಸಭೆ ಸೇರಲು ಸೂಚಿಸಲಾಗಿದೆ. ಈ ಸಂಬಂಧ ಇಂದು ಪೂಜ್ಯ ಮಹಾಪೌರರು ಪಾಲಿಕೆ ಕೇಂದ್ರ ಕಛೇರಿ ಕೆಂಪೇಗೌಡ ಪೌರ ಸಭಾಂಗಣಕ್ಕೆ ಭೇಟಿ ನೀಡಿ ಪೂರ್ವ ಸಿದ್ದತೆ ನಡೆಸಿರುವ ಬಗ್ಗೆ ಸ್ಥಳ ತಪಾಸಣೆ ನಡೆಸಿದರು. ತದನಂತರ, ಎಲ್ಲಾ 8 ವಲಯಗಳ ಜಂಟಿ ಆಯುಕ್ತರ ಜೊತೆ ವೀಡಿಯೋ ಕಾನ್ಫರೆನ್ಸ್ ಮೂಲಕ ಮಾತನಾಡಿ ವ್ಯವಸ್ಥಿತವಾಗಿ ಸಿದ್ದತೆ ಮಾಡಿಕೊಳ್ಳುವಂತೆ ಸೂಚನೆ ನೀಡಿರುತ್ತಾರೆ. ಈ ವೇಳೆ ವಿರೋಧ ಪಕ್ಷದ ನಾಯಕರು ಶ್ರೀ ಅಬ್ದುಲ್ ವಾಜೀದ್, ಜೆ.ಡಿ.ಎಸ್ ಪಕ್ಷದ ನಾಯಕರು ಶ್ರೀಮತಿ ನೇತ್ರಾ ನಾರಾಯಣ್, ವಿಶೇಷ ಆಯುಕ್ತರು(ಆಡಳಿತ) ಶ್ರೀ ಅನ್ಬುಕುಮಾರ್, ಉಪ ಆಯುಕ್ತರು(ಆಡಳಿತ) ಶ್ರೀ ಲಿಂಗಮೂರ್ತಿ, ಕೌನ್ಸಿಲ್ ಕಾರ್ಯದರ್ಶಿ ಶ್ರೀ ಹೇಮಂತ್ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಕೋವಿಡ್-19 ಹಿನ್ನೆಲೆ ಬಿಬಿಎಂಪಿ ಆಯವ್ಯಯವನ್ನು ಇದೇ ಪ್ರಥಮ ಬಾರಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಮಂಡನೆ ಮಾಡಲಾಗುತ್ತಿದೆ. ಈ ಸಂಬಂಧ ಎಲ್ಲಾ ವ್ಯವಸ್ಥಿತವಾಗಿರುವಂತೆ ನೋಡಿಕೊಳ್ಳಬೇಕು. ಯಾವುದೇ ಅಡಚಣೆಯುಂಟಾಗಬಾರದು ಎಂದು ಪೂಜ್ಯ ಮಹಾಪೌರರು ಎಲ್ಲಾ ವಲಯಗಳ ಜಂಟಿ ಆಯುಕ್ತರುಗಳಿಗೆ ಸೂಚನೆ ನೀಡಿದರು. ಬಜೆಟ್ ಮಂಡಿಸುವ ವೇಳೆ ಧ್ವನಿ ಸರಿಯಾಗಿ ಕೇಳಿಸಬೇಕು. ಪಾಲಿಕೆ ಕೇಂದ್ರ ಕಛೇರಿಯಲ್ಲಿ ಮಾತನಾಡುವ ಧ್ವನಿ ಹಾಗೂ ವಲಯಗಳಲ್ಲಿ ಮಾತನಾಡುವ ಧ್ವನಿ ಸಮರ್ಪಕವಾಗಿ ಕೇಳಿಸಬೇಕು ಎಂದು ತಾಂತ್ರಿಕ ಸಿಬ್ಬಂದಿಗಳಿಗೆ ಸೂಚನೆ ನೀಡಲಾಯಿತು.

ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.

ಸಾರ್ವಜನಿಕ ಸಂಪರ್ಕಾಧಿಕಾರಿ